# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 877

ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ

ಉತ್ತರಿಸುವ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು

ಉತ್ತರಿಸುವ ದಿನಾಂಕ : 13-12-2023

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ಶಾಲಾ ಕಾಲೇಜಿನ ವಿದ್ಯಾರ್ಥಿಗಳಿಗೆ ಉಚಿತ ಸಾರಿಗೆ ವ್ಯವಸ್ಥೆ ಕಲ್ಪಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ದಿನಾಂಕ:11.06.2023ರಿಂದ ರಾಜ್ಯದ ನಾಲ್ಕು ರಸ್ತೆ ಸಾರಿಗೆ ನಿಗಮಗಳು ಶಕ್ತಿ ಯೋಜನೆಯನ್ನು ಅನುಷ್ಠಾನಗೊಳಿಸಿದ್ದು, ಇದರಡಿ ರಾಜ್ಯದ ಎಲ್ಲಾ ಮಹಿಳೆಯರು, ವಿದ್ಯಾರ್ಥಿನಿಯರು ಹಾಗೂ ಲಿಂಗತ್ವ ಅಲ್ಪಸಂಖ್ಯಾತರಿಗೆ ರಸ್ತೆ ಸಾರಿಗೆ ನಿಗಮಗಳ ನಗರ, ಸಾಮಾನ್ಯ ಹಾಗೂ ವೇಗದೂತ ಬಸ್ಸುಗಳಲ್ಲಿ ರಾಜ್ಯದೊಳಗೆ ಉಚಿತವಾಗಿ ಪ್ರಯಾಣಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.<br><br>ರಾಜ್ಯದ ನಾಲ್ಕು ಸಾರಿಗೆ ಸಂಸ್ಥೆಗಳಲ್ಲಿ 1ನೇ ತರಗತಿಯಿಂದ 7ನೇ ತರಗತಿವರೆಗಿನ ಎಲ್ಲಾ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್‌ಗಳನ್ನು ವಿತರಣೆ ಮಾಡಲಾಗುತ್ತಿದೆ. ಎಲ್ಲಾ ತರಗತಿಗಳ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್‌ಗಳನ್ನು ವಿತರಣೆ ಮಾಡಲಾಗುತ್ತಿದೆ. ಇನ್ನುಳಿದ ವಿದ್ಯಾರ್ಥಿಗಳಿಗೆ ರಿಯಾಯಿತಿ ದರದ ವಿದ್ಯಾರ್ಥಿ ಪಾಸ್‌ಗಳನ್ನು ವಿತರಣೆ ಮಾಡಲಾಗುತ್ತಿದೆ. |
| ಆ. | ಮಹಿಳೆಯರಿಗೆ ಸಂಪೂರ್ಣ ಉಚಿತ ಪ್ರಯಾಣ ಸಾರಿಗೆ ಸೌಲಭ್ಯ ಕಲ್ಪಿಸಿರುವಂತೆ ಶಾಲಾ ಕಾಲೇಜಿನ ವಿದ್ಯಾರ್ಥಿಗಳಿಗೆ ಉಚಿತ ಸೌಲಭ್ಯ ಕಲ್ಪಿಸಲು ಸರ್ಕಾರಕ್ಕಿರುವ ತೊಂದರೆಗಳೇನು; | |
| ಇ. | ಯಾವ ಕಾಲಮಿತಿಯಲ್ಲಿ ವಿದ್ಯಾರ್ಥಿಗಳಿಗೆ ಉಚಿತ ಸಾರಿಗೆ ಸೌಲಭ್ಯ ಕಲ್ಪಿಸಲಾಗುವುದು? | |

ಸಂಖ್ಯೆ: ಟಿಡಿ 224 ಟಿಸಿಕ್ಯೂ 2023

(ರಾಮಲಿಂಗಾರೆಡ್ಡಿ)
ಸಾರಿಗೆ ಮತ್ತು ಮುಜರಾಯಿ ಸಚಿವರು